ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದೊಡ್ಡಬಳ್ಳಾಪುರ

ಸಿಸಿ ನಂ 274/17

ಪಿಡಬ್ಲ್ಯೂ: 1 ಸಿಡಬ್ಲೂ: 1

| | |
|---|---|
| ಸಾಕ್ಷಿದಾರನ ಹೆಸರು | **ಇಡದಾಸರ ಪೈಡರಾಜು** |
| **ತಂದೆ** ಹೆಸರು | ಇಡದಾಸರ ಮುತ್ಯಾಲು |
| ವಯಸ್ಸು | 43 ವರ್ಷ |
| ಉದ್ಯೋಗ | ಕೂಲಿ |
| ವಾಸ ಸ್ಥಳ | ಕಿತ್ತನಪೇಟೆ, ಅಂಧ್ರಪ್ರದೇಶ |
| ದಿನಾಂಕ | 05-10-2021 |

ಮುಂದುರೆದ ಮುಖ್ಯ ವಿಚಾರಣೆ ಮಾನ್ಯ ಎ ಪಿ ಪಿ ಯವರಿಂದ:

ಚಾಸ-2 ಮತ್ತು 3 ಗೊತ್ತಿಲ್ಲ, ಮೃತ ಇಡದಾಸರಿ ದೇವಿ ನನ್ನ ಹೆಂಡತಿ. ದಿನಾಂಕ 21-04-2014 ರಂದು ನನ್ನ ಹೆಂಡತಿಗೆ ಮೂರ್ಛೇರೋಗ ಬಂದು ಕಟ್ಟಡದ ಮೇಲೆ ಬಿದ್ದಿರುತ್ತಾರೆ ಹಾಗಾಗಿ ಮೃತಪಟ್ಟಿರುತ್ತಾರೆ. ಪ್ರಕರಣದ ಘಟನೆ ಬಗ್ಗೆ ವಿಚಾರಗಳು ನನಗೆ ಗೊತ್ತಿರುವುದಿಲ್ಲ, ಯಾರ ನಿರ್ಲಕ್ಷತನದಿಂದ ಇಡದಾಸರಿ ದೇವಿ ಮೃತಪಟ್ಟಿರುತ್ತಾರೆಂದು ನನಗೆ ಹೇಳಲಾಗುವುದಿಲ್ಲ, ಘಟನೆ ಸಂಬಂಧ ನಾನು ಯಾವುದೇ ದೂರನ್ನು ನೀಡಿರುವುದಿಲ್ಲ,

ಸಾಕ್ಷಿಗೆ ದೂರನ್ನು ತೋರಿಸಲಾಗಿ ಅದರಲ್ಲಿ ತಾನು ಹೆಬ್ಬೆಟ್ಟನ್ನು ಹಾಕಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಹಾಗಾಗಿ ಸದರಿ ದಾಖಲೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ, ನಿಪಿ-1 ಕ್ಕೆ ಪೊಲೀಸರ ಕೋರಿಕೆ ಮೇರೆಗೆ ನಾನು ಸಹಿ ಮಾಡಿರುತ್ತೇನೆ. ಈ ಪ್ರಕರಣದ ಸಂಬಂಧ ಪೊಲೀಸರು ನನ್ನನ್ನು ವಿಚಾರಣೆ ಮಾಡಿರುವುದಿಲ್ಲ, ನಾನು ಪೊಲೀಸರ ಮುಂದೆ ಯೊವುದೇ ಹೇಳಿಕೆ ನೀಡಿರುವುದಿಲ್ಲ,

**ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು.**

**ಪಾಟೀ ಸವಾಲು ಎಪಿಪಿ ಯವರಿಂದಃ**

**ದಿನಾಂಕ 21-04-2014 ರಂದು ಬೆಳಿಗ್ಗೆ 10-30 ಗಂಟೆ ಸಮುಯದಲ್ಲಿ ನಾಗದೇನಹಳ್ಳಿ ಗ್ರಾಮದ ಬಳಿ ಇರುವ ಗೀತಂ ಯೂನಿವರ್ಸಿಟಿ ಕಾಲೇಜಿನ ಕಟ್ಟಡ ನಿರ್ಮಾಣ ಕೆಲಸ ನಡೆಯುತ್ತಿತ್ತೆಂದರೆ ಸರಿ. ನ್ಯಾಯಾಲಯದ ಮುಂದಿರುವ ಆರೋಪಿ ಸದರಿ ಕಟ್ಟಡ ನಿರ್ಮಾಣದ ಕಾಮಗಾರಿ ಸ್ಥಳದಲ್ಲಿ ಸೂಪರ್‌ವೈಸರ್ ಅಗಿ ಕೆಲಸ ಮಾಡುತ್ತಿದ್ದರೆಂದರೆ ಸರಿಯಲ್ಲ. ಕಟ್ಟಡ ನಿರ್ಮಾಣ ಕಾಮಗಾರಿ ಸ್ಥಳದಲ್ಲಿ ಕೆಲಸಗಾರರ ಜೀವರಕ್ಷಣೆಗೆ ಯಾವುದೇ ಸುರಕ್ಷಿತ ಕ್ರಮಗಳನ್ನು ಆರೋಪಿ ಕೈಗೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಸದರಿ ನಿರ್ಲಕ್ಷ್ಯ ವಹಿಸಿದ್ದರಿಂದ ನಿರ್ಮಾಣ ಹಂತದ ಕಟ್ಟಡದ 4ನೇ ಅಂತಸ್ತಿನಲ್ಲಿ ಕೆಲಸ ಮಾಡುತ್ತಿದ್ದ ನನ್ನ ಹೆಂಡತಿ ಇಡದಾಸರಿದೇವಿರವರು ಆಯಾ ತಪ್ಪಿ ಕೆಳಗೆ ಬಿದ್ದು ತಲೆ, ಹೊಟ್ಟೆ, ಎಡಪಕ್ಕೆಗೆ, ಬೆನ್ನಿಗೆ ತೀವ್ರಸ್ವರೂಪದ ರಕ್ತಗಾಯಗಳಾಗಿ ಮೃತಪಟ್ಟಿರುತ್ತಾರೆಂದರೆ ಸರಿಯಲ್ಲ. ನನ್ನ ಹೆಂಡತಿಯ ಸಾವಿಗೆ ನ್ಯಾಯಾಲಯದ ಮುಂದಿರುವ ಆರೋಪಿಯ ನಿರ್ಲಕ್ಷ್ಯತನವೇ ಕಾರಣ ಎಂದರೆ ಸರಿಯಲ್ಲ. ಈ ಸಂಬಂಧ ನಿಪಿ-1 ರಂತೆ ಪೊಲೀಸರಿಗೆ ನಾನು ದೂರನ್ನು ನೀಡಿರುತ್ತೇನೆಂದರೆ ಸರಿಯಲ್ಲ. ಆರೋಪಿಯೊಂದಿಗೆ ರಾಜೀ ಮಾಡಿಕೊಂಡು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.**

ಪಾಟೀ ಸವಾಲು ಏನೂ ಇಲ್ಲ.

**(ನನ್ನ ಉಕ್ತಲೇಖನ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

ಓ ಹೇ ಕೇ ಸ ಇ ಎ ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು
ದೊಡ್ಡಬಳ್ಳಾಪುರ

ಪಿ.ಡಬ್ಲೂ 1